# ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪವಲಯ, ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಕೆ.ಆರ್.ಪಿ.ಉವ/ಪಿಆರ್/ /2022-23 ದಿನಾಂಕ: 02-12-2022

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 02-12-2022 ರಂದು ಹೊಸ ವಾರ್ಡ್ ಸಂಖ್ಯೆ:86 ಕೆ.ಆರ್.ಪುರ ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನೋಡಲ್ ಅಧಿಕಾರಿಗಳು ಹಾಗೂ ಶ್ರೀ.ಸೋಮನಾಥ್ ಜಾದವ್, ಸಹಾಯಕ ಅಭಿಯಂತರರು ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

## "ಸಭೆಯಲ್ಲಿ ಚರ್ಚಿಸಲಾದ ವಿಷಯಗಳು"

| ಕ್ರಮ ಸಂಖ್ಯೆ | ವಿಷಯ | ತೀರ್ಮಾನ |
|---|---|---|
| 1 | ವಾರ್ಡ್ ಮಟ್ಟದಲ್ಲಿ ಘನ ತ್ಯಾಜ್ಯ ನಿರ್ವಹಣೆ ಬಗ್ಗೆ ಹಾಗೂ ಶೌಚಾಲಯ ಸ್ವಚ್ಛಗೊಳಿಸುವ ಬಗ್ಗೆ. | ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಹಾಗೂ ವಾಡ್ ಮಟ್ಟದ ಕಾರ್ಯದರ್ಶಿಗಳು ಸಭೆಯನ್ನು ಕುರಿತು ಮಾತನಾಡುತ್ತಾ, ನಿವಾಸಿಗಳು ಘನತ್ಯಾಜ್ಯವನ್ನು ಪ್ರತಿ ದಿನ ಸಂಗ್ರಹಿಸುವ ಬಗ್ಗೆ ಕೋರಿದರು. ವಾರ್ಡ್ ಮಟ್ಟದಲ್ಲಿ ಘನ ತ್ಯಾಜ್ಯ ರಸ್ತೆಗಳಲ್ಲಿ ಮನೆಯ ಬದಿಯ ರಸ್ತೆಗಳಲ್ಲಿ ಕಸವನ್ನು ತೆಗೆಯದೇ ಅಲ್ಲಿಯೇ ಬಿಟ್ಟಿರುವುದು ಹಾಗೂ ಕಾಲಕಾಲಕ್ಕೆ ತ್ಯಾಜ್ಯವನ್ನು ಸಂಗ್ರಹಣೆ ಮಾಡುವ ವಾಹನಗಳು ವಾರ್ಡ್ ರಸ್ತೆಗಳಲ್ಲಿ ಬರುವಾಗ ಮೈಕ್‌ನ್ನು ಅಳವಡಿಸದೇ ಬರುವುದರಿಂದ ಅಲ್ಲಿನ ಸಾರ್ವಜನಿಕರು ಕಸವನ್ನು ರಸ್ತೆ ಬದಿಯಲ್ಲಿ ಸುರಿದು ಹೋಗುವುದರಿಂದ, ಆ ತ್ಯಾಜ್ಯದಿಂದ ರೋಗ-ರುಜಿನುಗಳು ಹರುಡುವಿಕೆ ಹೆಚ್ಚಾಗುವ ಕಾರಣಕ್ಕೆ ಸಾರ್ವಜನಿಕರ ಆರೋಗ್ಯದ ಮೇಲೆ ಪರಿಣಾಮಕಾರಿಯಾಗಿ ಬೀರುತ್ತವೆ ಎಂದು ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. ಹಾಗೂ ವಾರ್ಡ್‌ಗಳಲ್ಲಿ ಅಲ್ಲಲ್ಲಿ ಕಸದ ರಾಶಿ(ಬ್ಲಾಕ್ ಸ್ಪಾಟ್)ಯನ್ನು ಹಾಕಿರುವುದನ್ನು ತೆರವಗೊಳಿಸಲು ಸೂಚಿಸಲಾಯಿತು. ಸದರಿ ವಿಷಯವನ್ನು ಉದ್ದೇಶಿಸಿ ಕಿರಿಯ ಆರೋಗ್ಯಾಧಿಕಾರಿಗಳು ಮಾತನಾಡುತ್ತಾ, ಸಾರ್ವಜನಿಕರ ಸಮಸ್ಯೆಗಳನ್ನು ಕೂಡಲೇ ಭಗೆಹರಿಸಿ ಇಂತಹ ಸಮಸ್ಯೆ ಮರುಕಳಿಸದಂತೆ ಮುನ್ನೆಚ್ಚರಿಕೆ ಕ್ರಮವನ್ನು ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.<br>ಕೆ.ಆರ್.ಪುರ ವ್ಯಾಪ್ತಿಯ ಬಿಬಿಎಂಪಿ ಕಛೇರಿಯ ಎದುರು ರಸ್ತೆಯಲ್ಲಿರುವ ಸಾರ್ವಜನಿಕ ಶೌಚಾಲಯವನ್ನು ಸುಚಿಗೊಳ್ಳಿಸುವಂತೆ ಸಭೆಯಲ್ಲಿ ತಿಳಿಸಿದರು.ಇದಕ್ಕೆ ಹಾಜರಿದ್ದ ಸದರಿ ಇಲಾಖೆಯ ಅಧಿಕಾರಿಗಳು ಕೂಡಲೇ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು.<br>ಹಾಗೂ ಟಿ.ಸಿ.ಪಾಳ್ಯ ಸಿಗ್ನಲ್ ಬಳಿ ಸಾರ್ವಜನಿಕರ ಶೌಚಾಲಯವನ್ನು ನಿರ್ಮಿಸುವಂತೆ ಕೋರಿದರು. ಇದಕ್ಕೆ ಮುಂದಿನ ದಿನಗಳಲ್ಲಿ ಅನುದಾನ ಜಾರಿಯಾದರೆ ನಿರ್ಮಿಸುವುದಾಗಿ ತಿಳಿಸಿದರು. |
| 2 | ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸುವ ಬಗ್ಗೆ. | ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಒಳಚರಂಡಿ ಸಂಪರ್ಕ ಮತ್ತು ಕುಡಿಯುವ ನೀರಿನ ಸಮರ್ಪಕ ಸರಬುರಾಜುಗಾಗಿ ಕೈಗೊಂಡಿರುವ ಅನೇಕ ಕಾಮಗಾರಿಗಳನ್ನು ಕೈಗೊಂಡು ಅಗೆದಿರುವ ರಸ್ತೆಗಳನ್ನು ಪುನಶ್ಚೇತಗೊಳಿಸದೇ ಅನೇಕ ಕಡೆ ಹಾಗೆಯೇ ಬಿಟ್ಟಿರುವುದು ಕಂಡು ಬಂದಿರುತ್ತದೆ. ಇದರಿಂದ ವಾರ್ಡ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಸಮಸ್ಯೆಯಾಗುತ್ತಿದ್ದು, ಆದರಿಂದ ರಸ್ತೆಯನ್ನು ಪುನಶ್ಚೇತಗೊಳಿಸಲು ಹಾಜರಿದ್ದ ಸದರಿ ಅಧಿಕಾರಿಗಳಿಗೆ ತಿಳಿಸಿದರು.<br>ಕೆ.ಆರ್.ಪುರ ವ್ಯಾಪ್ತಿಯ ಕೋಟೆ ದೇವಸ್ಥಾನದ ಬಳಿ ರಸ್ತೆ ಅಗೆದಿದ್ದು ಅದನ್ನು ಪುನಶ್ಚೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ ವಾಹನ ಸಂಚಾಲಕರಿಗೆ ತೊಂದರೆ ಅಗುತ್ತಿದ್ದು ,ಕೂಡಲೇ ಪುನಶ್ಚೇತಗೊಳಿಸುವಂತೆ ಕೇಳಿದರು. ಸಭೆಯಲ್ಲಿ ಹಾಜರಿದ್ದ ಸದರಿ ಅಧಿಕಾರಿಗಳು ಕೂಡಲೇ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |
| 3 | ಕೆರೆಗಳ ಒತ್ತುವರಿಯ ಮಾಹಿತಿ ಬಗ್ಗೆ | ಕೆ.ಆರ್.ಪುರ ಉಪ ವಿಭಾಗ ವ್ಯಾಪ್ತಿಯಲ್ಲಿ ಕೆರೆಗಳಿಗೆ ಒತ್ತುವರಿಯಾಗಿರುವ ಭೂ ಮಾಹಿತಿ ಮತ್ತು ಗಡಿ ಗುರುತನ್ನು ಮಾಡಿಕೊಡಲು ಕೆರೆಗಳ ಇಲಾಖೆಯವರಿಗೆ ತಿಳಿಸಲಾಯಿತು. |

| | | |
|---|---|---|
| 4. | ಪಾದಾಚಾರಿ ರಸ್ತೆ ಮಾರ್ಗವನ್ನು ತೆರವುಗೊಳಿಸಲು ಹಾಗೂ ಪಾದಾಚಾರಿ ಮಾರ್ಗವನ್ನು ಅಗಲೀಸುವ ಬಗ್ಗೆ. | ವಾರ್ಡ ವ್ಯಾಪ್ತಿಯಲ್ಲಿ ಪಾದಾಚಾರಿ ರಸ್ತೆಯಲ್ಲಿ ವಾಹನ ನಿಲುಗಡೆ ಮತ್ತು ವ್ಯಾಪಾರಿಗಳು ವ್ಯಾಪಾರ ಮಾಡುತ್ತಿರುವುದರಿಂದ ಪಾದಾಚಾರಿ ರಸ್ತೆಯಲ್ಲಿ ಓಡಾಡುವ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಟ್ರಾಫಿಕ್ ಪೋಲೀಸ್ ಇಲಾಖೆಯವರೊಂದಿಗೆ ವಾರ್ಡ್ ಅಭಿಯಂತರರು ಸಮನ್ವಯ ಸಾಧಿಸಿ ಪಾದಾಚಾರಿ ರಸ್ತೆಯಲ್ಲಿ ವ್ಯಾಪಾರಸ್ಥರನ್ನು ತೆರವುಗೊಳಿಸಿ ಮತ್ತು ಪಾದಾಚಾರಿ ರಸ್ತೆಯಲ್ಲಿ ದುರಸ್ಥಿಯಾಗಿರುವ ಸ್ಲಾಬ್‌ಗಳನ್ನು ಅಳವಡಿಸಲು ಹಾಜರಿದ್ದ ಅಧಿಕಾರಿಯವರಿಗೆ ತಿಳಿಸಲಾಗಿದೆ.<br><br>ಟಿ.ಸಿ.ಪಾಳ್ಯಯಲ್ಲಿರುವ ಪೆಟ್ರೋಲ್ ಬಂಕ್ ನಿಂದ ರಿಲೈನ್ಸ್ ಫ್ರೆಶ್ ಮಾರ್ಟ್ ವರೆಗೂ ಪಾದಾಚಾರಿ ಮಾರ್ಗವನ್ನು ಬೀದಿ ವ್ಯಾಪಾರಿಗಳು ಒತ್ತುವರಿ ಮಾಡಿಕೊಂಡಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ತುರ್ತಾಗಿ ತೆರವುಗೊಳಿಸಲು ರಸ್ತೆ ಮೂಲಭೂತ ಸೌಕರ್ಯ ಇಲಾಖೆಗೆ ಸೂಚಿಸಿದೆ.ಮತ್ತು ಕೆ.ಆರ್.ಪುರ ಮುಖ್ಯ ರಸ್ತೆಯ ಫುಟ್‌ಪಾತ್‌ನ್ನು ಅಗಲೀಕರಿಸುವಂತೆ ಚರ್ಚಿಸಲಾಯಿತು. |
| 5. | ವಾರ್ಡ ವ್ಯಾಪ್ತಿಯಲ್ಲಿ ಗುಂಡಿ ಮುಕ್ತ ರಸ್ತೆಗಳನ್ನಾಗಿಸುವ ಮತ್ತು ರಸ್ತೆಗಳನ್ನು ನಿರ್ವಹಣೆ ಮಾಡುವ ಬಗ್ಗೆ. | ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಇರುವುದರಿಂದ ವಾಹನ ಸಂಚಾಲಕರಿಗೆ ಮತ್ತು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಪ್ರಾಣ ಅಪಘಾತವಾಗುವ ಸಂಭವವಿರುತ್ತದೆ. ಆದ್ದರಿಂದ ಸದರಿ ವಾರ್ಡ್ ಅಭಿಯಂತರರು ಕೂಡಲೇ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಹಾಗೂ ರಸ್ತೆ ಬದಿಯಲ್ಲಿರುವ ಚರಂಡಿಗಳಲ್ಲಿ ಹೂಳನ್ನು ತೆಗೆದು ಮಳೆ ನೀರು ಸರಾಗವಾಗಿ ಹರಿಯಲು ಮಾಡಿಕೊಡಲು ತಿಳಿಸಿದರು.<br><br>ಕೆ.ಆರ್.ಪುರ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವಂತೆ ಕೇಳಿದರು.ಇದಕ್ಕೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ಸದರಿ ಸಮಸ್ಯೆಯನ್ನು ಕೂಡಲೇ ಬಗೆಹರಿಸಲು ಸಭೆಯಲ್ಲಿ ತಿಳಿಸಿದರು. |
| 6. | ಕಂದಾಯ ಇಲಾಖೆಗೆ ಸಂಬಂಧಪಟ್ಟ ವಿಷಯಗಳು. | ಸೇಲ್ ಡೀಡ್‌ಗಾಗಿ ಎನ್.ಒ.ಸಿ. ಇಲ್ಲದೆ ಮುಂದಿನ ಕ್ರಮ ಕೈಗೊಳ್ಳಬಾರದಂತೆ ಜಾರಿ ಮಾಡಲು ತಿಳಿಸಿದರು. |
| 7. | ಅನಧೀಕೃತ ಕಟ್ಟಡ ನಿರ್ಮಾಣ. | ಸರ್ವೆ ನಂ. 7/1 ರ ಟಿ.ಸಿ.ಪಾಳ್ಯ ದಲ್ಲಿ ಅನಧೀಕೃತ ಕಟ್ಟಡವನ್ನು ನಿರ್ಮಿಸಿದ್ದಾರೆ ಎಂದು "Nethaji Federation" ರವರು ದೂರು ಸಲ್ಲಿಸಿದ್ದಾರೆ. ಹಾಗಾಗಿ ಮುಂದಿನ ಕ್ರಮ ಕೈಗೊಳ್ಳಲು ಕಂದಾಯ ಇಲಾಖೆಯವರು ಈ ಜಾಗದ ಕುರಿತು ಮಾಹಿತಿ ನೀಡಬೇಕಾಗಿ ಕಂದಾಯ ಇಲಾಖೆಗೆ ಮತ್ತು ತೋಟಗಾರಿ ಇಲಾಖೆಗೆ ತಿಳಿಸಲಾಯಿತು. |

ವಾರ್ಡ್ ಕಮಿಟಿ ನೋಡಲ್ ಅಧಿಕಾರಿ ಮತ್ತು ಕಾರ್ಯದರ್ಶಿಗಳು, ನೌಕರರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಈ ಮೇಲ್ಕಂಡಂತೆ ತಿಳಿಸಿರುವ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಹಾಗೂ ನಿರ್ಣಯಗಳಂತೆ ಕೆ.ಆರ್.ಪುರ ವಾರ್ಡ್ ನಂ:86 ವ್ಯಾಪ್ತಿಯಲ್ಲಿ ಕೆಲಸ ಕಾರ್ಯಗಳನ್ನು ಆದ್ಯತೆ ಮೇರೆಗೆ ನಿರ್ವಹಿಸಲು ನಿರ್ಣಯಿಸಲಾಯಿತು.

ಕೆ.ಆರ್.ಪುರ ವಾರ್ಡ ನಂ: 86 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 86

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.